**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

**ಪ್ರಶ್ನೆ**

ಪ್ರಾಥಮಿಕ ಹಂತದಲ್ಲಿಯೇ ಸಮಸ್ಯೆ | ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಡಿಡಿಪಿಐ ನೋಟಿಸ್ | ಈ ಮಕ್ಕಳನ್ನು ಎಸ್.ಎಸ್.ಎಲ್.ಸಿ ಯಲ್ಲಿ ಪಾಸ್ ಮಾಡಿಸುವುದು ಹೇಗೆ? ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘದಿಂದ ಆಕ್ಷೇಪ

ಸರ್ಕಾರಿ ಹಾಗೂ ಅನುದಾನಿತ ಶಾಲೆಯಲ್ಲಿ ಎಸ್ಸೆಸ್ಸೆಲ್ಸಿ ಓದುತ್ತಿರುವ ಸುಮಾರು 7 ಸಾವಿರ ವಿದ್ಯಾರ್ಥಿಗಳಿಗೆ ಮಾತೃಭಾಷೆ ಕನ್ನಡ ಓದಲು, ಬರೆಯಲು ಬರುತ್ತಿಲ್ಲ ಹಾಗೂ ಗಣಿತದ ಕನಿಷ್ಠ ಜ್ಞಾನವೂ ಇಲ್ಲ. ಅವರನ್ನು ಪಾಸ್ ಮಾಡುವಂತೆ ಸಿದ್ಧಪಡಿಸಲು ಹೇಗೆ ಸಾಧ್ಯ. ಇಂತಹದೊಂದು ಮೂಲಭೂತ ಪ್ರಶ್ನೆಯನ್ನು ಕೊಪ್ಪಳ ಜಿಲ್ಲೆಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದವರು ಎತ್ತಿದ್ದು ಈ ಕುರಿತು ಅವರು ಕೊಪ್ಪಳ ಡಿಡಿಪಿಐ ಮತ್ತು ಜಿಲ್ಲಾ ಪಂಚಾಯತ್ ಸಿಇಒ ಅವರಿಗೆ ಮನವಿ ಸಹ ಸಲ್ಲಿಸಿ, ಬುನಾದಿ ಶಿಕ್ಷಣ ವ್ಯವಸ್ಥೆ ಸರಿಪಡಿಸುವಂತೆ ಕೋರಿದ್ದಾರೆ. ಪ್ರಾಥಮಿಕ ಶಾಲೆಯಲ್ಲಿ ಕಡ್ಡಾಯ ಶಿಕ್ಷಣ ಮತ್ತು ಶಾಲೆಗೆ ಬರದಿದ್ದರೂ ಹಾಜರಿ ಹಾಕಿ ಪಾಸ್ ಮಾಡಿ, ತಳ್ಳುತ್ತಿರುವುದರಿಂದ ಹೀಗಾಗುತ್ತಿದೆ. ಪ್ರಾಥಮಿಕ ಶಾಲಾ ಹಂತದಲ್ಲಿ ಶಿಕ್ಷಣ ಗುಣಮಟ್ಟ ಕುಸಿದಿರುವುದಕ್ಕೆ ಇದು ಸಾಕ್ಷಿಯಾಗಿದೆ. ಪ್ರಸಕ್ತ ವರ್ಷ ಕೊಪ್ಪಳ ಜಿಲ್ಲೆಯಲ್ಲಿ ಸುಮಾರು 23 ಸಾವಿರ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿದ್ದಾರೆ. ಈ ಪೈಕಿ ಸರ್ಕಾರಿ ಮತ್ತು ಅನುದಾನ ಶಾಲೆಯಲ್ಲಿ ಓದುತ್ತಿರುವ 7 ಸಾವಿರ ವಿದ್ಯಾರ್ಥಿಗಳಿಗೆ ಕನ್ನಡವನ್ನು ಓದಲು, ಬರೆಯಲು ಬರಲ್ಲ, ಜೊತೆಗೆ ಗಣಿತದಲ್ಲಿ ಕೂಡಿಸುವುದು ಮತ್ತು ಕಳೆಯುವ ಲೆಕ್ಕ ಮಾಡದಷ್ಟು ಕನಿಷ್ಠರಾಗಿದ್ದಾರೆ. ಇದು, ಕೇವಲ ಕೊಪ್ಪಳ ಜಿಲ್ಲೆಯ ಲೆಕ್ಕಾಚಾರ. ರಾಜ್ಯಾದ್ಯಂತ ಇದರ ಸಂಖ್ಯೆ ಇನ್ನು ಹಲವಾರು ಪಟ್ಟು ಇದೆ.

ಬೆಳಕಿಗೆ: ಕಳೆದ ವರ್ಷ ಫಲಿತಾಂಶ ತೀವ್ರ ಕುಸಿದಿರುವುದರಿಂದ ಹೇಗಾದರೂ ಫಲಿತಾಂಶ ಮೇಲೆತ್ತಬೇಕು ಎಂದು ಪ್ರೌಢಶಾಲಾ ಮುಖ್ಯೋಪಾಧ್ಯಾಯರು ಹಾಗೂ ಸಹ ಶಿಕ್ಷಕರ ಮೇಲೆ ಅಧಿಕಾರಿಗಳಿಂದ ಒತ್ತಡ ಹಾಕಲಾಗುತ್ತಿದೆ. ಇದರಿಂದ ಕೆರಳಿರುವ ಪ್ರೌಢಶಾಲಾ ಸಹ ಶಿಕ್ಷಕರ ಸಂಘದವರು ಓದಲು, ಬರೆಯಲು ಬಾರದೆ ಇರುವ ಹಾಗೂ ಗಣಿತದಲ್ಲಿ ಕೂಡಿಸುವುದು, ಕಳೆಯುವ ಲೆಕ್ಕ ಬಾರದಿರುವ ವಿದ್ಯಾರ್ಥಿಗಳನ್ನು ನಾವು ಹೇಗೆ ಪಾಸ್ ಮಾಡಿಸುವಂತೆ ಸಿದ್ಧ ಮಾಡಬೇಕು ಎಂದು ಆಕ್ಷೇಪ ಎತ್ತಿದ್ದಾರೆ. ಅಷ್ಟೇ ಅಲ್ಲ, ಈ ಸಮಸ್ಯೆಯನ್ನೇ ಮುಂದಿಟ್ಟುಕೊಂಡು ಡಿಡಿಪಿಐ ಹಾಗೂ ಕೊಪ್ಪಳ ಜಿಪಂ ಸಿಇಒಗೆ ಮನವಿ ಸಲ್ಲಿಸಿದ್ದಾರೆ. ಆಗ ಪರಿಶೀಲನೆ ಮಾಡಿದಾಗ ಎಸ್ಸೆಸ್ಸೆಲ್ಸಿಯಲ್ಲಿರುವ ಮಕ್ಕಳ ಸ್ಥಿತಿಗತಿಯನ್ನು ಅರಿಯುವ ಪರೀಕ್ಷೆ ಮಾಡಿದ ಫಲಿತಾಂಶ ನೋಡಿದಾಗ ಇದೆಲ್ಲವೂ ಗೊತ್ತಾಗಿದೆ. ಎಸ್ಸೆಸ್ಸೆಲ್ಸಿಯಲ್ಲಿ ಇರುವ ವಿದ್ಯಾರ್ಥಿಗಳ ಪೈಕಿ ಗಳ ಪೈಕಿ 7 ಸಾವಿರ ವಿದ್ಯಾರ್ಥಿಗಳು ಹೀಗಿರುವುದು ಗೊತ್ತಾಗಿದೆ.

ಮುಖ್ಯೋಪಾಧ್ಯಾಯರಿಗೆ ನೋಟಿಸ್: ಪ್ರಾಥಮಿಕ ಹಂತದಲ್ಲಿಯೇ ಸರಿಯಾದ ಶಿಕ್ಷಣ ದೊರೆಯುತ್ತಿಲ್ಲ. ಪ್ರಾಥಮಿಕ ಶಾಲೆಯಲ್ಲಿರುವ ಏಳನೇ ತರಗತಿ ವಿದ್ಯಾರ್ಥಿಗಳಿಗೂ ಓದು, ಬರಹ ಗೊತ್ತಿರದ ಶೇ. 30ರಷ್ಟು ವಿದ್ಯಾರ್ಥಿಗಳು ಇದ್ದಾರೆ. ಇವರನ್ನು ತೇರ್ಗಡೆ ಮಾಡಿ, ಪ್ರೌಢಶಾಲೆಗೆ

ಕಳುಹಿಸಲಾಗುತ್ತದೆ. ಹೀಗಾಗಿಯೇ ಸಮಸ್ಯೆಯಾಗುತ್ತದೆ. ಆದ್ದರಿಂದ ಬುನಾದಿ ಸಾಕ್ಷರತೆ ಮತ್ತು ಸಂಖ್ಯಾಜ್ಞಾನ ಇಲ್ಲದಿರುವುದು ಕಂಡುಬರುತ್ತಿದೆ. ಮುಖ್ಯೋಪಾಧ್ಯಾಯರು ಪ್ರಾಥಮಿಕ ಆ ದಿಸೆಯಲ್ಲಿ ನಿಗಾವಹಿಸಬೇಕು ಎಂದು ಕೊಪ್ಪಳ ಡಿಡಿಪಿಐ ನೋಟಿಸ್ ಜಾರಿ ಮಾಡಿದ್ದಾರೆ. ಮಕ್ಕಳನ್ನು ಶಾಲೆಗೆ ಕರೆತರುವುದು, ಶಾಲೆಗೆ ಬಂದಿರುವ ಮಕ್ಕಳಿಗೆ ವಿಶೇಷ ಕಾಳಜಿ ನೀಡುವುದು, ಅವರಿಗೆ ಬುನಾದಿ ಸಾಕ್ಷರತೆ ಮತ್ತು ಸಂಖ್ಯಾ ಜ್ಞಾನ ಇರುವಂತೆ ನೋಡಿಕೊಳ್ಳುವ ಹೊಣೆ ನಿಮ್ಮದಾಗಿದೆ ಎಂದು ಎಚ್ಚರಿಕೆ ನೀಡಲಾಗಿದೆ. ಇದರ ಬಗ್ಗೆ ಸೂಕ್ತ ಕ್ರಮವನ್ನು ವಹಿಸುವಂತೆ ನಾನು ಸದನದ ಶೂನ್ಯ ವೇಳೆಯಲ್ಲಿ ರಾಜ್ಯ ಸರ್ಕಾರವನ್ನು ಒತ್ತಾಯಿಸುತ್ತೇನೆ.

## ಉತ್ತರ

ಕರ್ನಾಟಕ ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಬುನಾದಿ ಅಕ್ಷರ ಮತ್ತು ಸಂಖ್ಯಾ ಜ್ಞಾನ ಅನುಷ್ಠಾನಕ್ಕಾಗಿ ತೆಗೆದುಕೊಂಡಿರುವ ಕ್ರಮಗಳು:

1. 2022-23 ನೇ ಸಾಲಿನಿಂದ 1 ನೇ ತರಗತಿಯಲ್ಲಿ ಕಲಿಯುತ್ತಿರುವ ಮಕ್ಕಳಿಗೆ ಶಾಲಾ ಸಿದ್ಧತಾ ಕಾರ್ಯಕ್ರಮದ ಭಾಗವಾಗಿ 3 ತಿಂಗಳ 'ವಿದ್ಯಾಪ್ರವೇಶ' ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆ. ಸದರಿ ಕಾರ್ಯಕ್ರಮಕ್ಕೆ ಪೂರಕವಾಗಿ ಚಟುವಟಿಕೆಯ ಹಾಳೆಗಳನ್ನು ಸಿದ್ಧಪಡಿಸಲಾಗಿದ್ದು ಮಕ್ಕಳ ಪಠ್ಯಪುಸ್ತಕಗಳಲ್ಲಿಯೇ ಇವುಗಳನ್ನು ಅಳವಡಿಸಿ ವಿತರಿಸಲಾಗಿದೆ.
2. ವಿದ್ಯಾಪ್ರವೇಶ ಕಾರ್ಯಕ್ರಮದ ಗುರಿ ಹಾಗೂ ಉದ್ದೇಶವನ್ನು ಅರ್ಥೈಸಲು 1 ರಿಂದ 3ನೇ ತರಗತಿವರೆಗಿನ ಒಟ್ಟು 61,100 ಶಿಕ್ಷಕರಿಗೆ 3 ದಿನಗಳ ತರಬೇತಿಯನ್ನು ನೀಡಲಾಗಿರುತ್ತದೆ.
3. 2023-24 ನೇ ಸಾಲಿನಿಂದ ಬುನಾದಿ ಅಕ್ಷರ ಮತ್ತು ಸಂಖ್ಯಾ ಜ್ಞಾನದ ಉದ್ದೇಶವನ್ನು ಈಡೇರಿಸಲು ಕಲಿಕೆಯ ಫಲ ಆಧಾರಿತ ಅಭ್ಯಾಸ ಸಹಿತ ಪಠ್ಯಪುಸ್ತಕಗಳನ್ನು ಸಿದ್ಧಪಡಿಸಿದ್ದು ಉಚಿತ ವಿತರಣೆ ಅಡಿಯಲ್ಲಿ ಎಲ್ಲಾ ಶಾಲಾ ಮಕ್ಕಳಿಗೂ ವಿತರಿಸಲಾಗಿದೆ.
4. 2023-24 ನೇ ಸಾಲಿನಲ್ಲಿ ಬುನಾದಿ ಅಕ್ಷರ ಹಾಗೂ ಸಂಖ್ಯಾಜ್ಞಾನದ ಉದ್ದೇಶವನ್ನು ಆದ್ಯತೆಯಲ್ಲಿ ಪರಿಗಣಿಸಿ ಕಲಿಕಾ ಬಲವರ್ಧನೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆ. ಸದರಿ ಕಾರ್ಯಕ್ರಮದ ಅಡಿಯಲ್ಲಿ ಎಲ್ಲಾ ಮಕ್ಕಳಿಗೂ ಚಟುವಟಿಕೆ ಪುಸ್ತಕಗಳನ್ನು ವಿತರಿಸಲಾಗಿರುತ್ತದೆ. ಈ ಕಾರ್ಯಕ್ರಮವನ್ನು ಮೇಲ್ವಿಚಾರಣೆ ಮಾಡಲು ಜಿಲ್ಲಾ ಹಾಗೂ ತಾಲ್ಲೂಕು ಹಂತದ ಅಧಿಕಾರಿಗಳಿಗೆ ಒಂದು ದಿನದ ಪುನಶ್ಚೇತನ ತರಬೇತಿಯನ್ನು ನೀಡಲಾಗಿದೆ.
5. 2022-23ನೇ ಸಾಲಿನಿಂದ ದ್ವಿತೀಯ ಭಾಷೆ ಇಂಗ್ಲಿಷ್ ವಿಷಯದಲ್ಲಿ ಮಕ್ಕಳ ಕಲಿಕೆಯನ್ನು ಪ್ರೋತ್ಸಾಹಿಸಲು ಇಂಗ್ಲಿಷ್ ನಲಿಕಲಿ/ಇ.ಎನ್.ಕೆ (English Nali Kali) ಎಂಬ ವಿನೂತನ ಪಠ್ಯಕ್ರಮವನ್ನು ಅಳವಡಿಸಲಾಗಿದೆ. ಈ ಬಗ್ಗೆ ಒಟ್ಟು 53,800 ಶಿಕ್ಷಕರಿಗೆ ತರಬೇತಿಯನ್ನು ನೀಡಲಾಗಿರುತ್ತದೆ.
6. 2024-25ನೇ ಸಾಲಿಗೆ ಬುನಾದಿ ಅಕ್ಷರ ಮತ್ತು ಸಂಖ್ಯಾ ಜ್ಞಾನದ ಉದ್ದೇಶಕ್ಕಾಗಿ ಹೊಸ ಮಾದರಿಯ ಕಲಿಕಾ ಸಾಮಗ್ರಿಗಳನ್ನು ವಿನ್ಯಾಸಗೊಳಿಸಲಾಗಿದ್ದು ಕರ್ನಾಟಕ ಪಠ್ಯ ಪುಸ್ತಕ ಸಂಘ (ಕೆ.ಟಿ.ಬಿ.ಎಸ್) ಮೂಲಕ ಇವುಗಳನ್ನು ಮುದ್ರಿಸಿ ಸರಬರಾಜು ಮಾಡಲು ಕ್ರಮವಹಿಸಲಾಗಿದೆ.

7. 2024-25ನೇ ಸಾಲಿನಲ್ಲಿ 1 ರಿಂದ 5ನೇ ತರಗತಿವರೆಗಿನ ಮಕ್ಕಳನ್ನು ಗಮನದಲ್ಲಿಟ್ಟುಕೊಂಡು ಬುನಾದಿ ಅಕ್ಷರ ಹಾಗೂ ಸಂಖ್ಯಾಜ್ಞಾನದ ಉದ್ದೇಶವನ್ನು ಈಡೇರಿಸಲು 2ಡಿ/3ಡಿ ಕಲಿಕಾ ಸಾಮಗ್ರಿಗಳನ್ನು ಸಿದ್ಧಪಡಿಸಲಾಗಿದೆ. ಸದರಿ ಸಾಮಗ್ರಿಗಳನ್ನು ಶಾಲೆಗಳಿಗೆ ಸರಬರಾಜು ಮಾಡಲು ಪ್ರಸ್ತುತ ಸಮಗ್ರ ಶಿಕ್ಷಣ ಕರ್ನಾಟಕ ವತಿಯಿಂದ ಕ್ರಮವಹಿಸಲಾಗುತ್ತಿದೆ.
8. 2024-25ನೇ ಸಾಲಿಗೆ ಬುನಾದಿ ಅಕ್ಷರ ಮತ್ತು ಸಂಖ್ಯಾ ಜ್ಞಾನದ ಉದ್ದೇಶ ಈಡೇರಿಸಲು 01 ರಿಂದ 03 ನೇ ತರಗತಿಯ ಮಕ್ಕಳಲ್ಲಿ ಗೃಹಿಕೆಯೊಂದಿಗೆ ಓದುವ ಕೌಶಲ್ಯ ಅಭಿವೃದ್ಧಿಪಡಿಸಲು 45 ವಾಚಕ ಸಾಮಗ್ರಿಗಳನ್ನು ಸಿದ್ಧಪಡಿಸಿದ್ದು ಶಾಲೆಗಳಿಗೆ ಒದಗಿಸುವ ಪ್ರಕ್ರಿಯೆಯ ಪ್ರಗತಿಯಲ್ಲಿರುತ್ತದೆ.
9. 'ಗಣಿತ ಕಲಿಕಾ ಆಂದೋಲನ' ಕಾರ್ಯಕ್ರಮದ ಅಡಿಯಲ್ಲಿ 04 ಮತ್ತು 05 ನೇ ತರಗತಿಯ ಮಕ್ಕಳು ಸುಲಭವಾಗಿ ಗಣಿತದ ಪರಿಕಲ್ಪನೆಗಳನ್ನು ಅರ್ಥೈಸಿಕೊಳ್ಳಲು ಗಣಿತ ಕಿಟ್ 1.0 ಮತ್ತು 06 ರಿಂದ 08ನೇ ತರಗತಿಯ ಮಕ್ಕಳಿಗೆ ಗಣಿತ ಕಿಟ್ 2.0 ನೀಡಿ ಗಣಿತ ಬೋಧನಾ ಕಲಿಕೆ ಸುಗಮಗೊಳಿಸಲು ಕ್ರಮವಹಿಸಲಾಗಿದೆ.
10. ಪ್ರಸ್ತುತ 2024-25 ನೇ ಸಾಲಿನಲ್ಲಿ ಬುನಾದಿ ಅಕ್ಷರ ಮತ್ತು ಸಂಖ್ಯಾ ಜ್ಞಾನದ ಗುರಿ ಹಾಗೂ ಉದ್ದೇಶವನ್ನು ಅರ್ಥೈಸಲು ಹಾಗೂ ಕಲಿಕೆಯ ಫಲಗಳ ಬಗ್ಗೆ ಸ್ಪಷ್ಟವಾದ ತಿಳುವಳಿಕೆಯನ್ನು ಮೂಡಿಸಲು ಒಟ್ಟು 52,800 ಶಿಕ್ಷಕರಿಗೆ 5 ದಿನಗಳ ತರಬೇತಿಯನ್ನು ನೀಡಲಾಗಿದೆ.

**ಸಂಖ್ಯೆ:ಇಪಿ 431 ಪಿಜಿಸಿ 2024**

(ಎಸ್. ಮಧು ಬಂಗಾರಪ್ಪ)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.